1) ಪಶ್ಚಿಮ ಘಟ್ಟ ಅಭಿವೃದ್ಧಿಯೋಜನೆ

2) ಉದ್ಯೋಗ ಭರವಸೆ ಯೋಜನೆ

3) ವಿಶೇಷ ಘಟಕ ಯೋಜನೆ

4) ಗಿರಿಜನ ಉಪಯೋಜನೆ ಇವು ಸಂಬಂಧಿಸಿದ ಜಿಲ್ಲಾ ಪಂಚಾಯಿತಿ ಅಡಿಯಲ್ಲಿ ಅನುಷ್ಠಾನಗೊಳ್ಳುತ್ತಿವೆ.

ಕ್ಷೇತ್ರಗಳ ಪುನರ್ ವಿಂಗಡಣೆ ಮತ್ತು ಪುನರ್ ಹೊಂದಾಣಿಕೆ

4846 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾರತ ಸರ್ಕಾರವು ರಾಷ್ಟ್ರಾದ್ಯಂತ ವಿಧಾನಸಭೆ ಹಾಗೂ ಲೋಕಸಭಾ ಕ್ಷೇತ್ರಗಳನ್ನು ಪುನರ್ ವಿಂಗಡಿಸುವ ಉದ್ದೇಶ ಹೊಂದಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮವೇನು?

ಇ) ಚಾಮುಂಡೇಶ್ವರಿ ಕ್ಷೇತ್ರದಲ್ಲಿ 2,48,000 ಮತದಾರರಿದ್ದು ಮೈಸೂರು ನಗರದ ಸುತ್ತ ಹಾಗೂ ಗ್ರಾಮೀಣ ಪ್ರದೇಶ ಇರುವ ಹಿನ್ನೆಲೆಯಲ್ಲಿ ಈ ಕ್ಷೇತ್ರವನ್ನು ಪುನರ್ ವಿಂಗಡಿಸಿ ಪುನರ್ ಹೊಂದಾಣಿಕ ಮಾಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಉತ್ತರ ಉದ್ಭವಿಸುವುದಿಲ್ಲ.

ಇ) ಈಗ ಹಾಲಿ ಇರುವ ಲೋಕಸಭಾ ಮತ್ತು ವಿಧಾನಸಭಾ ಕ್ಷೇತ್ರಗಳ ವಿಂಗಡಣೆ ಆದೇಶ 1976 (Delimitation of Parliamentary and Assembly Constituencies vide 1976) 1971ರ ಜನಗಣತಿಯ ಜನಸಂಖ್ಯೆಯ ಪ್ರಕಾರವಾಗಿದೆ. ಭಾರತ ಸಂವಿಧಾನದ ಅನುಚ್ಛೇದ 170ರ ಉಪಬಂಧದ ಪ್ರಕಾರ 2000 ಇಸವಿಯ ನಂತರದ ಜನಗಣತಿಯ ಅಂಕಿಗಳು ಪ್ರಕಟವಾಗುವ ತನಕ ಹಾಲಿ ವಿಧಾನಸಭಾ ಕ್ಷೇತ್ರಗಳಲ್ಲಿ ಯಾವ ಬದಲಾವಣೆ ಮಾಡಲು ಅವಕಾಶವಿಲ್ಲ.

ಅನಾವಶ್ಯಕ ಹುದ್ದೆಗಳು

4847 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ವಿಭಾಗಾಧಿಕಾರಿಗಳ, ಉಪ ವಿಭಾಗಾಧಿಕಾರಿಯವರ ಅನುತ್ಪಾದಕ ಹಾಗೂ ಅನವಶ್ಯಕ ಹುದ್ದೆಗಳನ್ನು ರದ್ದು ಪಡಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆಯೆ?